ಕರ್ನಾಟಕ ರಾಜ್ಯ ಪತ್ರಾಗಾರ,
ಗ್ರಂಥಾಲಯ,
ವಿಧಾನ ಸೌಧ, ಬೆಂಗಳೂರು.

ಪಟ್ಟದ ಕಲ್ಲು ಹಾಗೂ ಐಹೊಳೆ ಕೇಂದ್ರಗಳನ್ನು ಪ್ರವಾಸಿ ಕೇಂದ್ರಗಳಾಗಿ ಘೋಷಿಸುವುದು:

857. ಶ್ರೀ ಹಳ್ಳಿಹೈದ ಮೇಟಿ (ಗುಳ್ಳೇದಗುಡ್ಡ) :- ಮಾನ್ಯ ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ -

ಅ) ಸರ್ಕಾರ ಪಟ್ಟದಕಲ್ಲು ಹಾಗೂ ಐಹೊಳೆ ಕೇಂದ್ರಗಳನ್ನು ಪ್ರವಾಸಿ ಕೇಂದ್ರಗಳನ್ನಾಗಿ ಎಂದಿನಿಂದ ಗುರುತಿಸಲಾಗಿದೆ ;

ಆ) ಹಾಗಿದ್ದಲ್ಲಿ ಪಟ್ಟದಕಲ್ಲು ಹಾಗೂ ಐಹೊಳೆ ಮಧ್ಯೆಯಿರುವ ರಸ್ತೆ ತುಂಬಾ ಕಳಪೆಯಾಗಿದ್ದು, ಪ್ರವಾಸಿಗರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಇ) ಹಾಗಿದ್ದಲ್ಲಿ ಮೇಲ್ಕಂಡ ರಸ್ತೆಯನ್ನು ಸರ್ಕಾರ ಡಾಂಬರೀಕರಣ ಮಾಡಿ ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳುವುದೆ ;

ಈ) ಎಂದಿನಿಂದ ಕ್ರಮ ಕೈಗೊಳ್ಳಲಾಗುವುದು ?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು) :-

ಅ) ಪ್ರವಾಸೋದ್ಯಮ ಇಲಾಖೆ ಅಸ್ತಿತ್ವಕ್ಕೆ ಬಂದಾಗಿನಿಂದ ಅಂದರೆ 1974 ರಿಂದ ಪಟ್ಟದಕಲ್ಲು ಹಾಗೂ ಐಹೊಳೆಯನ್ನು ಪ್ರವಾಸಿ ಕೇಂದ್ರಗಳೆಂದು ಗುರುತಿಸಲಾಗಿದೆ.

ಆ) ಈ ರಸ್ತೆಯನ್ನು ಅಭಿವೃದ್ಧಿಪಡಿಸುವ ಕಾರ್ಯ ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಗೆ ಬರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ನೆಲಮಂಗಲ ಟೌನಿನಲ್ಲಿ ನಾಗರೀಕ ಸೌಲಭ್ಯಗಳನ್ನೊದಗಿಸುವುದು.

188 (156) - ಶ್ರೀ ಆಂಜನಾ ಮೂರ್ತಿ (ನೆಲಮಂಗಲ) :- ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ -

ಅ) ನೆಲಮಂಗಲ ಟೌನ್ ಪರಿವರ್ತಿತ ಮಂಡಲ ಪಂಚಾಯ್ತಿ ವ್ಯಾಪ್ತಿಯಲ್ಲಿ ಹಲವಾರು ಹೊಸ ಬಡಾವಣೆಗಳು ನಿರ್ಮಿತವಾಗಿರುವುದರಿಂದ ಕನಿಷ್ಟ ನಾಗರೀಕ ಸೌಲಭ್ಯಗಳಾದ ವಿದ್ಯುತ್ ದೀಪ, ಒಳಚರಂಡಿ ಹಾಗೂ ಕುಡಿಯುವ ನೀರಿನ ಅಭಾವ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಣದ ಅಭಾವದಿಂದ ಈ ನಾಗರೀಕ ಸೌಲಭ್ಯಗಳನ್ನು ಒದಗಿಸಲು ಸಾಧ್ಯವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ನೆಲಮಂಗಲ ನಗರದ ನಾಗರೀಕರಿಗೆ ಸೌಲಭ್ಯ ಒದಗಿಸಲು ವಿಶೇಷ ಧನಸಹಾಯ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

ಈ) ಹಾಗಿದ್ದಲ್ಲಿ ಎಷ್ಟು ದಿನಗಳಲ್ಲಿ ಅದಕ್ಕಾಗಿ ಹಣವನ್ನು ಮಂಜೂರು ಮಾಡಲಾಗುವುದು ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು) -

ಅ) ಹೌದು.

ಆ) ಹೌದು.

ಇ) ಪರಿಶೀಲಿಸಲಾಗುವುದು.

ಈ) ಪರಿಶೀಲಿಸಲಾಗುವುದು.